# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 190 (1184)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ನಗರಾಭಿವೃದ್ಧಿ ಸಚಿವರು

ವಿಷಯ : ಮಹಾನಗರ ಪಾಲಿಕೆಗಳಲ್ಲಿ ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆ ಬಗ್ಗೆ

(ಅ) ಕಳೆದ ಮೂರು ವರ್ಷಗಳಲ್ಲಿ ಬಿಬಿಎಂಪಿ ಮತ್ತು ರಾಜ್ಯದ ಇತರೆ ಮಹಾನಗರ ಪಾಲಿಕೆಗಳಲ್ಲಿ ವಸೂಲಾದ ಆಸ್ತಿ ತೆರಿಗೆ ಮೊತ್ತ ಎಷ್ಟು ಮತ್ತು ವಸೂಲಾಗದ ಮೊತ್ತವೆಷ್ಟು ; (ಪಾಲಿಕೆವಾರು ವಿವರ ನೀಡುವುದು)

(ಆ) ಈ ಮಹಾನಗರ ಪಾಲಿಕೆಗಳಲ್ಲಿ ರೂ.25.00 ಲಕ್ಷಕ್ಕೂ ಹೆಚ್ಚು ಮೊತ್ತದ ಆಸ್ತಿ ತೆರಿಗೆಯನ್ನು ಬಾಕಿ ಉಳಿಸಿಕೊಂಡಿರುವ ಕೈಗಾರಿಕೆಗಳು, ಕಂಪನಿಗಳು, ವಾಣಿಜ್ಯ ಸಂಕೀರ್ಣಗಳು, ಮಾಲ್‌ಗಳು, ಅಪಾರ್ಟ್‌ಮೆಂಟ್‌ಗಳು, ಮದುವೆ ಮಂಟಪಗಳು, ಶಾಲೆ-ಕಾಲೇಜುಗಳು ಹಾಗೂ ಇನ್ನಿತರೆ ವಾಣಿಜ್ಯ ವ್ಯವಹಾರ ನಡೆಸುವ ಕಟ್ಟಡಗಳು ಯಾವುವು ; ಇವರಿಂದ ವಸೂಲಾಗಬೇಕಾದ ಮೊತ್ತವೆಷ್ಟು; (ಪ್ರಕರಣವಾರು ದಾಖಲೆ ಸಹಿತ ವಿವರ ನೀಡುವುದು)

(ಇ) ಇಂತಹ ಬಹುತೇಕ ಪ್ರಕರಣಗಳಲ್ಲಿ ಆಸ್ತಿ ತೆರಿಗೆ ಪಾವತಿಸದೇ ಬಾಕಿ ಉಳಿಸಿಕೊಂಡಿರುವವರ ವಿರುದ್ಧ ಯಾವುದೇ ಕ್ರಮ ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಪ್ರಕರಣಗಳಲ್ಲಿ ಎಷ್ಟು ಬಡ್ಡಿ ವಸೂಲಿ ಮಾಡಲಾಗಿದೆ ; (ಪ್ರಕರಣವಾರು ದಾಖಲೆ ಸಹಿತ ವಿವರ ನೀಡುವುದು)

(ಈ) ಈ ರೀತಿ ಆಸ್ತಿ ತೆರಿಗೆಯನ್ನು ಬಾಕಿ ಉಳಿಸಿಕೊಂಡಿರುವ ಕೈಗಾರಿಕೆಗಳು, ಕಂಪನಿಗಳು, ವಾಣಿಜ್ಯ ಸಂಕೀರ್ಣಗಳು, ಮಾಲ್‌ಗಳು, ಅಪಾರ್ಟ್‌ಮೆಂಟ್‌ಗಳು, ಮದುವೆ ಮಂಟಪಗಳು, ಶಾಲೆ-ಕಾಲೇಜುಗಳು ಹಾಗೂ ಇನ್ನಿತರೆ ವಾಣಿಜ್ಯ ವ್ಯವಹಾರ ನಡೆಸುವ ಕಟ್ಟಡಗಳ ಮಾಲೀಕರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ಪ್ರಕರಣವಾರು ದಾಖಲೆ ಸಹಿತ ವಿವರ ನೀಡುವುದು)